## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1102(1224)**

ಸದಸ್ಯರ ಹೆಸರು : **ಶ್ರೀ ಎಂ.ವೈ ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

ಉತ್ತರಿಸುವ ದಿನಾಂಕ : **13.03.2025**

ಉತ್ತರಿಸುವ ಸಚಿವರು : **ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2023-24ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನ ನೀಡಲಾಗಿದೆಯೇ; (ಜಿಲ್ಲಾವಾರು ಮಾಹಿತಿ ನೀಡುವುದು) | -ಹೌದು-<br>2023-24ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಸರ್ಕಾರದಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಈ ಕೆಳಕಂಡಂತೆ ಅನುದಾನ ನಿಗಧಿಪಡಿಸಿ ಬಿಡುಗಡೆಗೊಳಿಸಲಾಗಿರುತ್ತದೆ<br>(ರೂ. ಕೋಟಿಗಳಲ್ಲಿ)<br>ಕ್ರ. ಸಂ / ವರ್ಷ / ನಿಗಧಪಡಿಸಿದ ಅನುದಾನ / ಬಿಡುಗಡೆಯಾದ ಅನುದಾನ<br>1 / 2023-24 / 3000.00 / 3000.00<br>2 / 2024-25 / 5000.00 / 3000.00<br>3 / 2025-26 / 5000.00 / 1500.00<br>ಸರ್ಕಾರದಿಂದ ಮಂಡಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಿಲಾಗುತ್ತಿಲ್ಲ. |
| (ಆ) | ಸದರಿ ಅನುದಾನದಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಸದರಿ ಅನುದಾನದಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸರ್ವತೋಮುಖ ಅಭಿವೃದ್ಧಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ ಯೋಜನೆ, ವಸತಿ ನಿಲಯ ಶಾಲೆಗಳು, ವಿಶ್ವವಿದ್ಯಾಲಯಗಳಿಗೆ ಮೂಲಸೌಲಭ್ಯಗಳು, ರಸ್ತೆ & ಚರಂಡಿ, ರಸ್ತೆ & ಸಂಪರ್ಕ ಕುಡಿಯುವ ನೀರು ಸರಬರಾಜು, ಶುದ್ಧ ಕುಡಿಯುವ ನೀರಿನ ಘಟಕಗಳು, ಪ್ರವಾಸೋದ್ಯಮ, ಕ್ರೀಡೆ, ಸಾರಿಗೆ, ನಗರ/ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳು, ಕೃಷಿ, ತೋಟಗಾರಿಕೆ, ಅರಣ್ಯೀಕರಣ, ಕೌಶಲ್ಯಾಭಿವೃದ್ಧಿ, ಸಣ್ಣ ಕೈಗಾರಿಕೆ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |

| | | |
|---|---|---|
| (ಇ) | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನವು ಕಲ್ಯಾಣ ಕರ್ನಾಟಕ ಭಾಗದ ವಿಧಾನ ಪರಿಷತ್ ಭಾಗದ ಶಾಸಕರಿಗೆ ಅನುದಾನ ಹಂಚಿಕೆಗೆ ಅವಕಾಶವಿದೆಯೇ; ಇದ್ದಲ್ಲಿ ಈ ಭಾಗದಲ್ಲಿ ಯಾವ ಯಾವ ಜಿಲ್ಲೆಯ ವಿಧಾನ ಪರಿಷತ್ ಶಾಸಕರಿಗೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ; | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿಧಾನ ಪರಿಷತ್ತಿನ ಸದಸ್ಯರಿಗೆ ಅನುದಾನ ನೀಡಲು ಅವಕಾಶವಿರುವುದಿಲ್ಲ.<br><br>ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನವನ್ನು ಡಾ.ಡಿ.ಎಂ.ನಂಜುಂಡಪ್ಪ ವರದಿಯ ಸಿ.ಡಿ.ಐ ಸೂಚ್ಯಾಂಕದ ಆಧಾರದ ಮೇಲೆ ಮೈಕ್ರೋ ಯೋಜನೆಯಡಿ ತಾಲ್ಲೂಕನ್ನು ಒಂದು ಘಟಕವನ್ನಾಗಿ ಪರಿಗಣಿಸಿ, ತಾಲ್ಲೂಕುವಾರು ಹಾಗೂ ಮ್ಯಾಕ್ರೋ ಯೋಜನೆಯಡಿ ಜಿಲ್ಲೆಯನ್ನು ಒಂದು ಘಟಕವನ್ನಾಗಿ ಪರಿಗಣಿಸಿ, ಜಿಲ್ಲಾವಾರು ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದೆ. ವಿಧಾನಸಭಾ ಕ್ಷೇತ್ರವಾರು /ವಿಧಾನ ಪರಿಷತ್ತಿನ ಶಾಸಕರುಗಳಿಗೆ ಅನುದಾನ ಹಂಚಿಕೆ ಮಾಡಲಾಗುತ್ತಿಲ್ಲ. |
| (ಈ) | ಇಲ್ಲದಿದ್ದಲ್ಲಿ ಸರ್ಕಾರದಿಂದ ತಾರತಮ್ಯ ಮಾಡದೇ ಕಲ್ಯಾಣ ಕರ್ನಾಟಕ ಭಾಗದ ವಿಧಾನ ಪರಿಷತ್ ಭಾಗದ ಶಾಸಕರಿಗೆ ಅನುದಾನ ಹಂಚಿಕೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು | ಡಾ.ಡಿ.ಎಂ.ನಂಜುಂಡಪ್ಪ ವರದಿಯ ಸಿ.ಡಿ.ಐ ಸೂಚ್ಯಾಂಕದ ಆಧಾರದ ಮೇಲೆ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿರುವುದರಿಂದ ಯಾವುದೆ ತಾರತಮ್ಯವಾಗಿರುವುದಿಲ್ಲ. ಆದ್ದರಿಂದ ಕಲ್ಯಾಣ ಕರ್ನಾಟಕ ಭಾಗದ ವಿಧಾನ ಸಭಾ ಸದಸ್ಯರಿಗಾಗಲಿ ಅಥವಾ ವಿಧಾನ ಪರಿಷತ್ತಿನ ಸದಸ್ಯರಿಗಾಗಲಿ ಅನುದಾನ ಹಂಚಿಕೆ ಮಾಡಲು ಅವಶ್ಯಕತೆ ಇರುವುದಿಲ್ಲ. |
| (ಉ) | ಸದರಿ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುಷ್ಠಾನಗೊಳಿಸಲಾದ ಕಾಮಗಾರಿಗಳನ್ನು ತಂತ್ರಾಂಶದಲ್ಲಿ (ವೆಬ್‌ಸೈಟ್) ಅಳವಡಿಸದೆ ಇರಲು ಕಾರಣವೇನು? (ಮಾಹಿತಿ ಒದಗಿಸುವುದು) | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುಷ್ಠಾನಗೊಳಿಸಲಾದ ಕಾಮಗಾರಿಗಳನ್ನು ಪ್ರಗತಿಗನುಗುಣವಾಗಿ ಹೈಕಾ ತಂತ್ರಾಂಶದಲ್ಲಿ ಕಾಲಕಾಲಕ್ಕೆ ಅಳವಡಿಸಲಾಗುತ್ತಿದೆ. |

**ಸಂಖ್ಯೆ: ಪಿಡಿಎಸ್ 10 ಹೆಚ್‌ಕೆಡಿ 2026**

**(ಡಿ.ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.

# ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1102(1224) ರ ಅನುಬಂಧ

(ರೂ. ಲಕ್ಷಗಳಲ್ಲಿ)

| Year | District | No of Works | Approved Allocation |
|---|---|---|---|
| 2023-24 | Bidar | 800 | 41571.295 |
| | Kalaburagi | 1404 | 80618.382 |
| | Yadgir | 1164 | 32233.541 |
| | Raichur | 953 | 55580.255 |
| | Koppal | 688 | 31951.775 |
| | Bellary | 587 | 18796.455 |
| | KK Region | 18 | 7472.884 |
| | Vijayanagar | 653 | 31842.252 |
| | **Total** | **6267** | **300066.839** |
| 2024-25 | Bidar | 834 | 56954.210 |
| | Kalaburagi | 1291 | 125542.034 |
| | Yadgir | 1049 | 44001.140 |
| | Raichur | 985 | 73940.180 |
| | Koppal | 621 | 53878.660 |
| | Bellary | 453 | 32562.516 |
| | KK Region | 14 | 46418.000 |
| | Vijayanagar | 462 | 43077.620 |
| | **Total** | **5709** | **476374.360** |
| 2025-26 | Bidar | 298 | 30060.563 |
| | Kalaburagi | 532 | 76191.430 |
| | Yadgir | 390 | 29421.000 |
| | Raichur | 463 | 42186.518 |
| | Koppal | 466 | 45220.290 |
| | Bellary | 170 | 21284.100 |
| | KK Region | 29 | 79499.077 |
| | Vijayanagar | 216 | 22662.080 |
| | **Total** | **2564** | **346525.058** |

ನಿರ್ದೇಶಕರು,
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ.